# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| 1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 2030 |
| 2. ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| 3. ಉತ್ತರಿಸುವ ದಿನಾಂಕ | : 17.03.2022 |
| 4. ಉತ್ತರಿಸುವ ಸಚಿವರು | : ಗೃಹ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಒಟ್ಟು ಎಷ್ಟು ಸಹಾಯಕ ಸರ್ಕಾರಿ ಅಭಿಯೋಜಕರ ಹುದ್ದೆಗಳು ಖಾಲಿ ಇವೆ; | **ಸಹಾಯಕ ಸರ್ಕಾರಿ ಅಭಿಯೋಜಕರ ಹುದ್ದೆಗಳ ಮಾಹಿತಿ:** (see table below) |
| ಆ) | 2013ನೇ ಸಾಲಿನಲ್ಲಿ ನಡೆದ ನೇಮಕಾತಿ ಪ್ರಕ್ರಿಯೆಯಲ್ಲಿ ಅಕ್ರಮವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. 2014ನೇ ಸಾಲಿನಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರುಗಳ ಆಯ್ಕೆಗೆ ಸಂಬಂಧಿಸಿದಂತೆ ಮಾನ್ಯ ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇಲ್ಲಿ ಪ್ರಕರಣವು ದಾಖಲಾಗಿದ್ದು, ಸದರಿ ಪ್ರಕರಣದಲ್ಲಿನ 61 ಸಹಾಯಕ ಸರ್ಕಾರಿ ಅಭಿಯೋಜಕರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಕರ್ನಾಟಕ ಲೋಕಾಯುಕ್ತಕ್ಕೆ ವಹಿಸಲಾಗಿರುತ್ತದೆ. ಮುಂದುವರೆದು, 61 ಸಹಾಯಕ ಸರ್ಕಾರಿ ಅಭಿಯೋಜಕರುಗಳಲ್ಲಿ ಒಬ್ಬರು ನಿಧನ ಹೊಂದಿದ್ದು, ಉಳಿದ 60 ಸಹಾಯಕ ಸರ್ಕಾರಿ ಅಭಿಯೋಜಕರುಗಳನ್ನು ಅಮಾನತ್ತಿನಲ್ಲಿರಿಸಲಾಗಿದೆ. |
| ಇ) | ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | |
| ಈ) | ಹೊಸದಾಗಿ ಸರ್ಕಾರಿ ಅಭಿಯೋಜಕರನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ಅಭಿಯೋಗ ಇಲಾಖೆಯಲ್ಲಿ ಖಾಲಿ ಇರುವ 205 ಸಹಾಯಕ ಸರ್ಕಾರಿ ಅಭಿಯೋಜಕರ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಈಗಾಗಲೇ ಪ್ರಾಥಮಿಕ ಪರೀಕ್ಷೆ ನಡೆದಿದ್ದು, ಮುಖ್ಯ ಪರೀಕ್ಷೆಗೆ ದಿನಾಂಕ:29.01.2022 ಹಾಗೂ 30.01.2022ಕ್ಕೆ ನಿಗದಿಪಡಿಸಿದ್ದು, ಕೋವಿಡ್ ಹಿನ್ನೆಲೆಯಲ್ಲಿ ಮುಂದೂಡಲಾಗಿದ್ದು, ಸದರಿ ಉದ್ದೇಶಿತ ಮುಖ್ಯ ಪರೀಕ್ಷೆಯನ್ನು 2022ನೇ ಸಾಲಿನ ಏಪ್ರಿಲ್ - ಜೂನ್ ಅವಧಿಯಲ್ಲಿ ನಿಗದಿಪಡಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು |

**ಸಹಾಯಕ ಸರ್ಕಾರಿ ಅಭಿಯೋಜಕರ ಹುದ್ದೆಗಳ ಮಾಹಿತಿ:**

| ಮಂಜೂರಾದ ಹುದ್ದೆಗಳು | ಭರ್ತಿಯಾದ ಹುದ್ದೆಗಳು | | ಖಾಲಿ ಹುದ್ದೆಗಳು |
|---|---|---|---|
| | ಖಾಯಂ | ಗುತ್ತಿಗೆ | |
| 515 | 156 | 233 | 126 |

ಒಇ 88 ಪಿಪಿಇ 2022

(ಅರಗ ಜ್ಞಾನೇಂದ್ರ)
ಗೃಹ ಸಚಿವರು